# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 20-11-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು**

ಹಾಜರಿದ್ದ ಸದಸ್ಯರು,

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಕಾವ್ಯ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)

ಹಾಜರಿದ್ದ ಅಧಿಕಾರಿಗಳು

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಸಭೆಯ ನಡವಳಿಗಳು

1) ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್) ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆ, ಸುಖ್ ಸಾಗರ್ ಹೋಟೆಲ್ ರಸ್ತೆ ಮತ್ತು 5ನೇ ಮುಖ್ಯರಸ್ತೆಯಲ್ಲಿ ರಾತ್ರಿ ವೇಳೆಯಲ್ಲಿ ಅನಾಮಧೇಯ ವ್ಯಕ್ತಿಗಳು ರಸ್ತೆಗಳಲ್ಲಿ ದೂಮಪಾನ ಮತ್ತು ಮದ್ಯಪಾನ ಸೇವಿಸುವುದು, ಅನೈತಿಕ ಚಟುವಟಿಕೆಗಳಲ್ಲಿ ಭಾಗಿಯಾಗುವುದು ಕಂಡುಬರುತ್ತಿದೆ ಎಂದು

ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಆದರೆ ಯಾವುದೇ ಕ್ರಮ ಕೈಗೊಂಡಿರುವ ಬಗ್ಗೆ ಪ್ರಗತಿ ಆಗಿರುವುದಿಲ್ಲ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಮುಂದಿನ ಸಭೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ರವರಿಗೆ ವಿಷಯ ಪ್ರಸ್ತಾಪಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

2) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,** ವಾರ್ಡ್ ಪ್ರದೇಶದ ಅನೇಕ ಬಡಾವಣೆಗಳಲ್ಲಿ ಸಾರ್ವಜನಿಕರು ಕಸವನ್ನು ಬಿಬಿಎಂಪಿ ವಾಹನಗಳಿಗೆ ನೀಡದೇ ರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಕಸವನ್ನು ಚೀಲಗಳಲ್ಲಿ ತುಂಬಿಸಿ ಎಲ್ಲಂದರಲ್ಲಿ ಎಸೆಯುತ್ತಿರುತ್ತಾರೆ. ಇದರಿಂದ ಬ್ಲಾಕ್‌ಸ್ಪಾಟ್‌ಗಳು ಉದ್ಭವವಾಗುತ್ತಿರುತ್ತವೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಎಲ್ಲಾ ಘನತ್ಯಾಜ್ಯ ನಿರ್ವಹಣೆಯ ಮೇಲ್ವಿಚಾರಕರಿಗೆ ಸೂಕ್ತ ರೀತಿಯಲ್ಲಿ ಕಾರ್ಯ ನಿರ್ವಹಿಸಿ, ಸಾರ್ವಜನಿಕರಿಗೆ ತಿಳುವಳಿಕೆ ನೀಡಿ, ಕಸವನ್ನು ಬಿಬಿಎಂಪಿ ವಾಹನಗಳಿಗೆ ನೀಡಲು ಜಾಗೃತಿ ಮೂಡಿಸಲು ಹಾಗೂ ಮಾರ್ಷಲ್‌ಗಳ ಮುಖಾಂತರ ದಂಡವನ್ನು ವಿಧಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

3) **ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಎಲ್ಲಾ ಬಡಾವಣೆಗಳಲ್ಲಿ ತೀರಾ ಹಳೆಯ ಮೋಟಾರ್ ವಾಹನಗಳನ್ನು ಶಾಶ್ವತವಾಗಿ ರಸ್ತೆ ಬದಿಯಲ್ಲಿ ನಿಲುಗಡೆ ಮಾಡಿದ್ದು, ಸಾರ್ವಜನಿಕರು ಕಸ ಇತ್ಯಾದಿ ಅನುಪಯುಕ್ತ ವಸ್ತುಗಳನ್ನು ವಾಹನಗಳ ಬದಿಯಲ್ಲಿ ಎಸೆಯುತ್ತಿರುವುದರಿಂದ ಕಸದ ಬ್ಲಾಕ್‌ಸ್ಪಾಟ್‌ಗಳಾಗಿ ನಿರ್ಮಾಣವಾಗುತ್ತಿರುತ್ತದೆ ಮತ್ತು ವಾತಾವರಣ ಕಲುಷಿತವಾಗುತ್ತಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಲಾಗಿ, ಸಭೆಯಲ್ಲಿ ಆರಕ್ಷಕ ಅಧಿಕಾರಿಗಳು (ಸಂಚಾರ) ಗೈರು ಹಾಜರಾಗಿದ್ದರಿಂದ ಮುಂದಿನ ಸಭೆಯಲ್ಲಿ ಚರ್ಚಿಸಿ, ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತು.

4) **ಅಧ್ಯಕ್ಷರು / ನೋಡೆಲ್ ಅಧಿಕಾರಿಗಳು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಅನೇಕ ರಸ್ತೆಗಳಲ್ಲಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ. ಆದರೆ ಬೀದಿ ದೀಪಗಳ ವಿಭಾಗದಿಂದ ಯಾವುದೇ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಗೆ ಹಾಜರಾಗದೇ ಸತತವಾಗಿ ಗೈರು ಹಾಜರಾಗುತ್ತಿರುತ್ತಾರೆ. ಈ ಬಗ್ಗೆ ಸಾರ್ವನಿಕರಿಂದ ಮೌಖಿಕ ದೂರುಗಳು ಬರುತ್ತಿದ್ದು, ಮುಂದಿನ ಸಭೆಯಲ್ಲಿ ಬೀದಿ ದೀಪಗಳ ವಿಭಾಗದಿಂದ ಅಧಿಕಾರಿಗಳು ಹಾಜರಾಗದಿದ್ದಲ್ಲಿ ಅವರಿಗೆ ನೆನಪೋಲೆ ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

5) **ಡಾ॥ ಕಾವ್ಯ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಪರೀಕ್ಷೆಗಳಿಗೆ ಒಳಪಟ್ಟ 1370 ಪ್ರಕರಣಗಳಿದ್ದು, ಈ ಪೈಕಿ 01 ಪ್ರಕರಣ ಮಾತ್ರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಪರೀಕ್ಷೆ ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 44185 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.